ಹೊಸ ಪ್ರೌಢ ಶಾಲೆಗಳನ್ನು ಪ್ರಾರಂಭಿಸುವುದು

507(867) -ಎಂ.ಜಿ. ಮುಳೆ (ಬಸವನಬಾಗೇವಾಡಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣದ ಮತ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಹೀರಣಗಾಂವ್ ನೀರಗುಳಿ, ಗದತಿಗಾಂವ್ ಗ್ರಾಮಗಳಲ್ಲಿನ 8ನೇ ತರಗತಿಯ ಮಕ್ಕಳಿಗಾಗಿ ಪ್ರೌಢಶಾಲೆಯು ಅಗತ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಮೇಲ್ಕಂಡ ಗ್ರಾಮಗಳಲ್ಲಿ ಪ್ರೌಢಶಾಲೆಯನ್ನು ಪ್ರಾರಂಭಿಸಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುವುದು ನಿಜವೆ;

ಇ) ಹಾಗಿದ್ದಲ್ಲಿ ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಮೇಲ್ಕಂಡ ಗ್ರಾಮಗಳಲ್ಲಿ ಪ್ರೌಢಶಾಲೆಯನ್ನು ಪಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಈ) ಇಲ್ಲದಿದ್ದಲ್ಲಿ ಕಾರಣಗಳೇನು?

ಪ್ರೊ.ಬಿ.ಕೆ. ಚಂದ್ರಶೇಖರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು): ಅ) ಗದತಿಗಾಂವ್‌ನಲ್ಲಿ ಸರ್ಕಾರಿ ಪ್ರೌಢಶಾಲೆ ಮಂಜೂರು ಮಾಡುವ ಬಗ್ಗೆ ಪ್ರಸ್ತಾವನೆಯು ಸರ್ಕಾರಕ್ಕೆ ಬಂದಿದ್ದು, ಸದರಿ ಪ್ರಸ್ತಾವನೆಯು ಸರ್ಕಾರದಲ್ಲಿ ಪರಿಶೀಲನೆಯಲ್ಲಿದೆ. ಆದರೆ ಹೀರಣಗಾಂವ್ ಮತ್ತು ನೀರಗುಳಿಗಳಲ್ಲಿ ಸರ್ಕಾರಿ ಪ್ರೌಢಶಾಲೆಯ ಅಗತ್ಯತೆ ಬಗ್ಗೆ ಪ್ರಸ್ತಾವನೆಗಳು ಬಂದಿರುವುದಿಲ್ಲ.

ರಾಜ್ಯದಲ್ಲಿ ಗ್ರಂಥಾಲಯಗಳ ಸ್ಥಾಪನೆಗಳಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳು

509(977) -ಶ್ರೀ ನಾರಾಯಣ ಸ್ವಾಮಿ ವಿ. (ಆನೇಕಲ್) : ವಯಸ್ಕರ ಶಿಕ್ಷಣ, ಗ್ರಂಥಾಲಯ, ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ನೂತನವಾಗಿ ಸ್ಥಾಪಿಸಿರುವ ಗ್ರಂಥಾಲಯಗಳು ಯಾವುವು; (ಜಿಲ್ಲಾ ಮತ್ತು ತಾಲ್ಲೂಕುವಾರು ವಿವರ ನೀಡುವುದು)

ಆ) ಬೆಂಗಳೂರು ಜಿಲ್ಲೆಯ ಆನೇಕಲ್ ಕ್ಷೇತ್ರದಲ್ಲಿ ಗ್ರಂಥಾಲಯ ಸ್ಥಾಪನೆಗಾಗಿ ಮನವಿಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಮಂಜೂರಾತಿ ನೀಡುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಈ) ಶೀಘ್ರ ಅನುಷ್ಠಾನಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳಾವುವು?

ಶ್ರೀ ಬಾಬುರಾವ್ ಚವ್ಹಾಣ (ವಯಸ್ಕರ ಶಿಕ್ಷಣ, ಗ್ರಂಥಾಲಯ, ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು): ಅ) 2000-01ನಾ ಸಾಲಿನಲ್ಲಿ ನೂತನವಾಗಿ ಪ್ರಾರಂಭಿಸಲಾದ ಗ್ರಂಥಾಲಯದ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.